ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದ:-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಕುಟುಂಬದದ ವಂಶವೃಕ್ಷವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಚಂದ್ರಯ್ಯನವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಎಂ.ಆರ್ 39/2005-2006ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ದಾವಾ ಆಸ್ತಿಗೆ ಸಂಬಂಧಿಸಿದಂತೆ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-4 ರಿಂದ ನಿಪಿ-6 ಎಂದು, ದಿನಾಂಕ 11.04.2017ರಂದು ಆದ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ಎಂ.ಆರ್. ಹೆಚ್. 58/2016-2017ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು, ಮತ್ತೊಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಪ್ರತಿವಾದಿ ಪರ ವಕೀಲರಿಂದ:-

5ನೇ ಪ್ರತಿವಾದಿ ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು, ಪ್ರತಿವಾದಿಗಳು ಲಿಖಿತ ಹೇಳಿಕೆ ಸಲ್ಲಿಸದ ಕಾರಣ ಈ ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ನಿವೇದಿತ ಟಿ.ಎಂ.)
1ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.